# ದಿನಾಂಕ: 22/03/2021 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ–140 ಚಾಮರಾಜಪೇಟೆ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು:**

| ಕ್ರ. ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ |
|---|---|---|
| 1 | ಶ್ರೀಮತಿ. ಶಶಿಕಲಾ. ಎನ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ |
| 2 | ಶ್ರೀ. ಎಂ.ಎಸ್. ಉಮೇಶ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ–140 |
| 3 | ಶ್ರೀಮತಿ. ಅಶ್ವಿನಿ.ಟಿ.ಕೆ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ–140 |
| 4 | ಶ್ರೀಮತಿ. ಪಾರ್ವತಿ. ಜೆ | Link Worker, SWM |
| 5 | ಶ್ರೀಮತಿ. ಗಂಗಮ್ಮ. ಎನ್ | Link Worker , SWM |
| 6 | ಶ್ರೀ. ಮಹೇಶ್ ಗೌಡ.ಕೆ.ಆರ್ | ಮಾರ್ಷಲ್, ವಾರ್ಡ್ ಸಂಖ್ಯೆ–140 |
| 7 | ಶ್ರೀ. ಶಿವ ಕುಮಾರ್.ಪಿ | ಸ್ಥಳೀಯ ನಾಗರೀಕರು |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. **ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಚರ್ಚಿಸಿದ ವಿಷಯಗಳು:**

| ಕ್ರ. ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ಬೀದಿಬದಿ ವ್ಯಾಪಾರಿಗಳಿಂದ ಚಾಮರಾಜಪೇಟೆ ಮುಖ್ಯರಸ್ತೆಯಲ್ಲಿ ವಾಹನ ದಟ್ಟಣೆ ಹಾಗೂ ರಸ್ತೆ ಅಪಘಾತ ಸಂಭಂವಿಸುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. | ಈ ಬಗ್ಗೆ ಸಭೆಯಲ್ಲಿ ಎಲ್ಲಾ ಸಂಬಂಧಪಟ್ಟ ಇಲಾಖೆಗಳಾದ ಕಾಮಗಾರಿ, ಆರೋಗ್ಯ, ಘನತ್ಯಾಜ್ಯ, ಪೋಲೀಸ್ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ ವಿಭಾಗದವರು ಒಟ್ಟಾಗಿ ದಿನಾಂಕ ನಿಗಧಿಪಡಿಸಿ ತೆರವು ಕಾರ್ಯಾಚರಣೆ ಕೈಗೊಳ್ಳು ಸಭೆಯಲ್ಲಿ ತಿಳಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:140, ಆರೋಗ್ಯ ವೈಧ್ಯಾಧಿಕಾರಿ(ಚಾಮರಾಜಪೇಟೆ ವಿಭಾಗ), ಸಹಾಯಕ ಕಾರ್ಯಪಾಲಕ ಅಭಿಯಂತರರು (SWM), ಪೋಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ ವಿಭಾಗ |

ಪ್ರ.ತಿ.ನೋ

| | | | |
|---|---|---|---|
| **2** | ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಸಮರ್ಪಕವಾಗಿ ನಿರ್ವಹಣೆ ಆಗದಿರುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸದಿರುವ ಬಗ್ಗೆ ಸ್ಥಳೀಯ ಮುಖಂಡರು ಹಾಗೂ ಸದಸ್ಯರು ಸಭೆಯಲ್ಲಿ ದೂರು ನೀಡಿದರು. ಈ ಬಗ್ಗೆ ಅಧ್ಯಕ್ಷರು ಪರಿಶೀಲಿಸಿದಾಗ ಈ ಕೆಳಕಂಡ ಅಂಶಗಳ ಬಗ್ಗೆ ಕ್ರಮವಹಿಸುವಂತೆ ತಿಳಿಸಿದರು.<br>1. ವಾರ್ಡ್ ವ್ಯಾಪ್ತಿಗೆ ಘನತ್ಯಾಜ್ಯ ನಿರ್ವಹಣೆಗಾಗಿ ಕಾರ್ಯಾದೇಶದಲ್ಲಿ ನಿಗದಿಪಡಿಸಿರುವ ಕಡಿಮೆ Auto Tipper ಗಳು ಕಾರ್ಯನಿರ್ವಹಿಸುತ್ತಿರುವ ಬಗ್ಗೆ.<br>2. ಪ್ರತಿನಿತ್ಯ ಸಾರ್ವಜನಿಕರು ಹಸಿತ್ಯಾಜ್ಯ ಒಣತ್ಯಾಜ್ಯ ವಿಂಗಡಣೆ ಮಾಡಿ ನೀಡಿದ್ದರು ಪೌರ ಕಾರ್ಮಿಕರು ಮತ್ತು Auto Tipper ಚಾಲಕರು ಹಸಿತ್ಯಾಜ್ಯ ಒಣತ್ಯಾಜ್ಯ ಒಟ್ಟಾಗಿ ಸಂಗ್ರಹಿಸುತ್ತಿರುವ ಬಗ್ಗೆ.<br>3. ವಾರ್ಡ್ ವ್ಯಾಪ್ತಿಯಲ್ಲಿ ತ್ಯಾಜ್ಯ ಸಂಗ್ರಹಿಸಿ ಕೆಂಪಾಂಬುದಿ ಕೆರೆ ರಸ್ತೆ ಬದಿಯಲ್ಲಿ ತ್ಯಾಜ್ಯ ಘಟಕಕ್ಕೆ ವಿಲೇವಾರಿ ಮಾಡದೆ ರಸ್ತೆ ಬದಿಯಲ್ಲಿ ಸುಡುತ್ತಿರುವುದನ್ನು ಅಧ್ಯಕ್ಷರು ಗಮನಿಸಿ ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವುದಕ್ಕೆ ಸಭೇಯಲ್ಲಿ ತಿಳಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ವಿಭಾಗ |
| 3 | ಮಾನ್ಯ ಆಡಳಿತ ಅಧಿಕಾರಿಗಳ ಆದೇಶದನ್ವಯ 2021–22 ನೇ ಸಾಲಿನ ಅಯವ್ಯಯದಲ್ಲಿ ಸಿದ್ಧತೆ ಪೂರ್ವದಲ್ಲಿ ವಾರ್ಡ್ ಕಮಿಟಿ ಸದಸ್ಯರು ಹಾಗೂ ಸಾರ್ವಜನಿಕರು ಸಲಹೆ ಸೂಚನೆ ನೀಡುವ ಬಗ್ಗೆ. | ಈ ಬಗ್ಗೆ ವಾರ್ಡ್ ಕಮಿಟಿ ಸದಸ್ಯರು ಹಾಗೂ ಸಾರ್ವಜನಿಕರೊಂದಿಗೆ ಚರ್ಚಿಸಲಾಗಿ 2021–22ನೇ ಸಾಲಿನ ಅಯವ್ಯಯದಲ್ಲಿ ಈ ಕೆಳಕಂಡ ಅಂಶಗಳನ್ನು ಅಳವಡಿಸಿಕೊಳ್ಳಲು ಸಲಹೆ ನೀಡಿರುತ್ತಾರೆ.<br>1. Potholes ಮುಕ್ತ ರಸ್ತೆ ನಿರ್ಮಾಣ ಮಾಡುವ ಬಗ್ಗೆ.<br>2. ಘನತ್ಯಾಜ್ಯ ಸಮರ್ಪಕವಾಗಿ ನಿರ್ವಹಿಸುವ ಬಗ್ಗೆ.<br>3. ವಾರ್ಡ್ ವ್ಯಾಪ್ತಿಯಲ್ಲಿ ಹೂಳು ತುಂಬಿರುವ ರಸ್ತೆಬದಿ ಚರಂಡಿ ದುರಸ್ಥಿಗೊಳಿಸುವ ಬಗ್ಗೆ.<br>4. ಹಾಳಾಗಿರುವ ರಸ್ತೆ ಮತ್ತು ಫುಟ್‌ಪಾತ್‌ಗಳಿಗೆ ದುರಸ್ಥಿ ಕಾಮಗಾರಿಗಳು ಕೈಗೊಳ್ಳುವ ಬಗ್ಗೆ. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:140 |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

<u>ಪ್ರತಿಯನ್ನು:-</u>

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 140 ಚಾಮರಾಜಪೇಟೆ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಆರೋಗ್ಯ ವೈದ್ಯಾಧಿಕಾರಿ, ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಾಮರಾಜಪೇಟೆ ವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14. ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಚಾಮರಾಜಪೇಟೆ/ವಿ.ವಿ.ಪುರಂ/ಸೆಂಟ್ರಲ್ ಪೊಲೀಸ್ ಠಾಣೆ, ಬೆಂಗಳೂರು ರವರ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15. ಆರಕ್ಷಕ ನಿರೀಕ್ಷಕರು, ಜೆ.ಜೆ.ಆರ್. ನಗರ/ ಚಾಮರಾಜಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16. ವಾರ್ಡ್ ಸಂಖ್ಯೆ: 140 ಚಾಮರಾಜಪೇಟೆ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.